# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 2311 |
| ಸದಸ್ಯರ ಹೆಸರು | ಶ್ರೀ ಸಲೀಂ ಅಹಮದ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 21.03.2022 |
| ಉತ್ತರಿಸಬೇಕಾದ ಸಚಿವರು | ಮಾನ್ಯ ಉನ್ನತ ಶಿಕ್ಷಣ, ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಜೀವನೋಪಾಯ ಹಾಗೂ ಉದ್ಯಮಶೀಲತೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಹಾವೇರಿ ಜಿಲ್ಲಾ ಕೇಂದ್ರದಲ್ಲಿ ನಿರ್ಮಾಣವಾಗುತ್ತಿರುವ ಪ್ರಾದೇಶಿಕ ವಿಜ್ಞಾನ ಕೇಂದ್ರ ಕಾಮಗಾರಿ ಪೂರ್ಣವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಪೂರ್ಣಗೊಳಿಸಲು ಇರುವ ಸಮಸ್ಯೆಗಳೇನು; | ಹೌದು. ಸಮಸ್ಯೆಯು ಹೆಚ್ಚುವರಿ ಅನುದಾನಕ್ಕೆ ಸಂಬಂಧಿಸಿರುತ್ತದೆ. |
| ಆ) | ಈ ಯೋಜನೆಗೆ ಇದುವರೆಗೂ ಸರ್ಕಾರದಿಂದ ಬಿಡುಗಡೆ ಮಾಡಲಾದ ಅನುದಾನ ಎಷ್ಟು; ಮತ್ತು ಖರ್ಚಾದ ಅನುದಾನ ಎಷ್ಟು; | ಈ ಯೋಜನೆಗೆ ಇದುವರೆವಿಗೂ ಸರ್ಕಾರದಿಂದ ರೂ. 310.97 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದ್ದು, ಸಂಪೂರ್ಣವಾಗಿ ಖರ್ಚಾಗಿರುತ್ತದೆ. |
| ಇ) | ಸದರಿ ಕಾಮಗಾರಿಗಳು ಪ್ರಾರಂಭಗೊಂಡಿದ್ದು ಯಾವಾಗ; ವಿಳಂಬಕ್ಕೆ ಕಾರಣಗಳೇನು; ಯಾವ ಕಾಲಮಿತಿಯೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು? | ಸದರಿ ಯೋಜನೆಗೆ ಸರ್ಕಾರದ ಆಡಳಿತಾತ್ಮಕ ಅನುಮೋದನೆಯನ್ನು 2006ನೇ ಇಸವಿಯಲ್ಲಿ ನೀಡಲಾಯಿತು. ವಿಜ್ಞಾನ ಕೇಂದ್ರವನ್ನು ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರದ ಸಮಾನ ಪಾಲಿನೊಂದಿಗೆ ಒಟ್ಟು ರೂ.260 ಲಕ್ಷಗಳ ಅಂದಾಜು ವೆಚ್ಚದಲ್ಲಿ ಸ್ಥಾಪಿಸಬೇಕಿತ್ತು. ಆದರೆ, ಕೇಂದ್ರ ಸರ್ಕಾರವು ತನ್ನ ಪಾಲನ್ನು ನೀಡಲು ಒಪ್ಪಿರುವುದಿಲ್ಲ. ಆದುದರಿಂದ, ರಾಜ್ಯ ಸರ್ಕಾರದ ಶೇಕಡ 100ರಷ್ಟು ಅನುದಾನದೊಂದಿಗೆ ಸದರಿ ಯೋಜನೆಯನ್ನು ಕೈಗೆತ್ತಿಕೊಳ್ಳುವಂತೆ 2010ರಲ್ಲಿ ರಾಜ್ಯ ಸರ್ಕಾರದಿಂದ ಜಿಲ್ಲಾಡಳಿತಕ್ಕೆ |

| | | |
|---|---|---|
| | | ನಿರ್ದೇಶಿಸಲಾಯಿತು. ಸದರಿ ಯೋಜನೆಗಾಗಿ ಸೂಕ್ತವಾಗುವ ಜಮೀನನ್ನು ಗುರುತಿಸಿ ಹಂಚಿಕೆ ಮಾಡಲು ಜಿಲ್ಲಾಡಳಿತವು ಬಹಳ ಸಮಯ ತೆಗೆದುಕೊಂಡಿತು. 2016-17ನೇ ಸಾಲಿನಲ್ಲಿ 9.30 ಎಕರೆ ಜಮೀನನ್ನು ಹಂಚಿಕೆ ಮಾಡಿದ ನಂತರ ಈ ಯೋಜನೆಯ ನಿರ್ಮಾಣ ಕಾಮಗಾರಿಯು 2017ರಲ್ಲಿ ಪ್ರಾರಂಭಗೊಂಡಿತು.<br><br>ಜಮೀನು ಹಂಚಿಕೆಯಲ್ಲಾದ ವಿಳಂಬದಿಂದಾಗಿ ಯೋಜನೆಗೆ ಅಂದಾಜು ವೆಚ್ಚವು ರೂ.260 ಲಕ್ಷದಿಂದ ರೂ.700 ಲಕ್ಷಕ್ಕೆ ಹೆಚ್ಚಳವಾಯಿತು. ಜಿಲ್ಲಾಡಳಿತವು ಸದರಿ ಯೋಜನೆಯನ್ನು ಪೂರ್ಣಗೊಳಿಸಲು ಸರ್ಕಾರದಿಂದ ರೂ.350 ಲಕ್ಷಗಳ ಹೆಚ್ಚುವರಿ ಅನುದಾನವನ್ನು ಡಿಸೆಂಬರ್ 2021ರಲ್ಲಿ ಕೋರಿರುತ್ತದೆ.<br><br>ಯೋಜನಾ ವೆಚ್ಚವು ರೂ.260 ಲಕ್ಷದಿಂದ ರೂ.700 ಲಕ್ಷಕ್ಕೆ ಏರಿಕೆಯಾಗಿರುವುದರಿಂದ, ಸದರಿ ಯೋಜನೆಗೆ ಹೆಚ್ಚುವರಿ ಅನುದಾನವನ್ನು ಮಂಜೂರು ಮಾಡಲು ಸರ್ಕಾರದಿಂದ ಪರಿಷ್ಕೃತ ಆಡಳಿತಾತ್ಮಕ ಅನುಮೋದನೆಯು ಅವಶ್ಯವಾಗುತ್ತದೆ. ವಿಷಯವು ಆರ್ಥಿಕ ಇಲಾಖೆಯ ಸಮಾಲೋಚನೆಯೊಂದಿಗೆ ಸರ್ಕಾರದ ಪರಿಗಣನೆಯಲ್ಲಿದೆ. |

ಸಂಖ್ಯೆ: ಐಟಿಬಿಟಿ 71 ಎಸ್ ಟಿಎಸ್ 2022

**(ಡಾ: ಅಶ್ವಥ್ ನಾರಾಯಣ್ ಸಿ.ಎನ್)**
ಉನ್ನತ ಶಿಕ್ಷಣ, ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ,
ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು
ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ,
ಜೀವನೋಪಾಯ ಹಾಗೂ ಉದ್ಯಮಶೀಲತೆ ಸಚಿವರು